RNU AIR DHARWAD

# JULY 31,2024
# ALL INDIA RADIO- DHARWAD
# PRADESH SAMACHARA (KANNADA) 7:05 AM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ವಿವೇಕಾದಿತ್ಯ ಕನಿಯಾಲ

<><><>

ಮುಖ್ಯಾಂಶಗಳು:

- ರಾಜ್ಯಾದ್ಯಂತ ವ್ಯಾಪಕ ಮಳೆ; ಪ್ರಾಕೃತಿಕ ವಿಕೋಪ ಎದುರಿಸಲು, ಸನ್ನದ್ಧವಾಗಿರುವಂತೆ, ಜಿಲ್ಲಾಡಳಿತಗಳಿಗೆ ಕಟ್ಟುನಿಟ್ಟಿನ ಸೂಚನೆ.
- ವಯನಾಡ್ ದುರಂತ; ಅಗತ್ಯ ನೆರವು ಒದಗಿಸಲಾಗಿದೆ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಕೆರೆಗಳ ಸಂರಕ್ಷಣೆ; ತನ್ಮೂಲಕ, ಅಂತರ್ಜಲ ವರ್ಧನೆಗೆ ವೈಜ್ಞಾನಿಕ ಯೋಜನೆ – ಸಚಿವ ಎನ್.ಎಸ್.ಬೋಸರಾಜು.
- ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ, 5 ಸಾವಿರ ಎಕರೆ ಭೂಮಿ, ಕೈಗಾರಿಕಾ ವಲಯಕ್ಕೆ ಮೀಸಲು – ಸಚಿವ ಎಂ.ಸಿ.ಸುಧಾಕರ್.

<><><>

ಈಗ ವಾರ್ತೆಗಳ ವಿವರ

<><><>

ರಾಜ್ಯದೆಲ್ಲೆಡೆ ವ್ಯಾಪಕ ಮಳೆ ಮುಂದುವರೆದಿದ್ದು, ಎಲ್ಲ ಜಿಲ್ಲೆಗಳಲ್ಲಿ, ನಿಯಂತ್ರಣ ಕೊಠಡಿ ತೆರೆದು, ದಿನದ 24 ಗಂಟೆಯೂ ಮಳೆ, ಪ್ರವಾಹ, ಭೂ ಕುಸಿತದಂತಹ ಪ್ರಾಕೃತಿಕ ವಿಕೋಪಗಳನ್ನು ಎದುರಿಸಲು, ಸಿದ್ಧರಿರುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾಡಳಿತಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

<><><>

ಹಾಸನ ಜಿಲ್ಲೆ ಸಕಲೇಶಪುರ ತಾಲೂಕಿನ ದೊಡ್ಡತಪ್ಪಲೆ ಬಳಿ ಬೆಂಗಳೂರು–ಮಂಗಳೂರು ರಾಷ್ಟ್ರೀಯ ಹೆದ್ದಾರಿ–75ರಲ್ಲಿ ನಿನ್ನೆ ಮಧ್ಯಾಹ್ನ ಮತ್ತೆ ಭಾರೀ ಪ್ರಮಾಣದಲ್ಲಿ ಭೂ ಕುಸಿತವಾಗಿದೆ. 21 ಟನ್ ಅಡುಗೆ ಅನಿಲ ತುಂಬಿರುವ ಟ್ಯಾಂಕರ್ ಹಾಗೂ ಲಾರಿ ಸೇರಿದಂತೆ ಒಟ್ಟು 4 ವಾಹನಗಳು ಮಣ್ಣಿನಡಿ ಸಿಲುಕಿವೆ.

<><><>

ಘಟಪ್ರಭಾ ನದಿ ಪ್ರವಾಹಕ್ಕೆ ತುತ್ತಾದ, ಬಾಗಲಕೋಟೆ ಜಿಲ್ಲೆ ಮುಧೋಳ ತಾಲೂಕಿನ ವಿವಿಧ ಪ್ರದೇಶಗಳಿಗೆ, ಕಂದಾಯ ಖಾತೆ ಸಚಿವ, ಕೃ ್ಣ ಬೈರೇಗೌಡ ಭೇಟಿ ನೀಡಿ ಪರಿಶೀಲಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಜೂನ್ ಹಾಗೂ ಜುಲೈ ತಿಂಗಳಲ್ಲಿ ವಾಡಿಕೆಗಿಂತ ಶೇಕಡ 26ರ ್ಟು ಹೆಚ್ಚು ಮಳೆಯಾಗಿದೆ. ಮಲೆನಾಡು, ಕರಾವಳಿ, ಅರೆ ಮಲೆನಾಡು ಪ್ರದೇಶದಲ್ಲಿ ವ್ಯಾಪಕ ಮಳೆಯಾಗಿದ್ದು, ರಾಜ್ಯದಲ್ಲಿ ಸದ್ಯ 64 ಆರೈಕೆ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದ್ದು, 10 ಸಾವಿರ ಜನರಿಗೆ ಆಶ್ರಯ ನೀಡಲಾಗಿದೆ ಎಂದು ತಿಳಿಸಿದರು. ವಾರಾಂತ್ಯದಲ್ಲಿ ಬೆಳೆ ನ ್ಟದ ವರದಿ ಸಿದ್ಧಪಡಿಸಲಾಗುವುದು. ಮಳೆ ಹಾಗೂ ಮಳೆ ಸಂಬಂಧಿಸಿದ ಘಟನೆಗಳಿಂದ 48 ಮಂದಿ ಮೃತಪಟ್ಟಿದ್ದಾರೆ ಎಂದು ಮಾಹಿತಿ ನೀಡಿದರು.

<><><>

ಕೃಷ್ಣ ಬೈರೇಗೌಡ ಧ್ವನಿ 35 ಸೆಕೆಂದುಗಳು

<><><>

ಹಾಸನ ಹಾಗೂ ಚಿಕ್ಕಮಗಳೂರಿಗೆ ರೆಡ್ ಅಲರ್ಟ್ ಪ್ರಕಟಿಸಲಾಗಿದೆ. ಚಿಕ್ಕಮಗಳೂರು, ಮೂಡಿಗೆರೆ, ಕೊಪ್ಪ, ಶೃಂಗೇರಿ, ಕಳಸ ಹಾಗೂ ಎನ್.ಆರ್.ಪುರ ತಾಲೂಕಿನ ಶಾಲೆ, ಕಾಲೇಜುಗಳಿಗೆ ಇಂದು, ರಜೆ ಘೋಷಿಸಲಾಗಿದೆ. ಸಕಲೇಶಪುರದಲ್ಲಿ ಕಾಫಿ ಮತ್ತು ಮೆಣಸು ಬೆಳೆಗೆ ಅಪಾರ ಹಾನಿಯಾಗಿದೆ.

ದಕ್ಷಿಣಕನ್ನಡ ಜಿಲ್ಲೆಯಲ್ಲಿ ಅಂಗನವಾಡಿ ಸೇರಿದಂತೆ, ಎಲ್ಲ ಶಾಲೆ, ಪದವಿ ಪೂರ್ವ ಕಾಲೇಜುಗಳಿಗೆ ಇಂದು ರಜೆ ಘೋಷಿಸಲಾಗಿದೆ. ಪಶ್ಚಿಮ ಘಟ್ಟದ ಅರಣ್ಯ ವ್ಯಾಪ್ತಿಯ ಆಲಡ್ಕದಲ್ಲಿ, 13 ಕುಟುಂಬಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಉಪ್ಪಿನಂಗಡಿಯಲ್ಲಿ ನೆರೆ ಭೀತಿ ಎದುರಾಗಿದೆ. ನೇತ್ರಾವತಿ ಹಾಗೂ ಕುಮಾರಧಾರಾ ನದಿಗಳು ಮೈದುಂಬಿ ಹರಿಯುತ್ತಿವೆ.

ಕೊಡಗು ಜಿಲ್ಲೆಯಲ್ಲಿ ವರುಣನ ಆರ್ಭಟ ಮುಂದುವರೆದಿದೆ. ಕಾವೇರಿ ಹಿನ್ನೀರಿನಲ್ಲಿ ಸಿಲುಕಿದ್ದ, ಆರು ಜನ ಗ್ರಾಮಸ್ಥರನ್ನು, ಬೇತ್ರಿ ಬಳಿ ರಾಷ್ಟ್ರೀಯ ವಿಪತ್ತು ನಿರ್ವಹಣಾ ತಂಡ, ರಕ್ಷಿಸಿದೆ.

ತಲಕಾವೇರಿಯಲ್ಲಿ ರಭಸದ ಮಳೆಯಾಗುತ್ತಿದೆ. ಭಾಗಮಂಡಲದಲ್ಲಿ ಕಾವೇರಿ ನದಿ ನೀರು ಭಗಂಡೇಶ್ವರ ದೇವಾಲಯದ ಮೆಟ್ಟಿಲ ವರೆಗೆ ಬಂದು ತಲುಪಿದೆ. ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಾದ್ಯಂತ ಎರಡು ದಿನಗಳ ಕಾಲ ರೆಡ್ ಅಲರ್ಟ್ ಘೋಷಿಸಲಾಗಿದೆ.

ಧಾರವಾಡ ಜಿಲ್ಲೆ ಅಳ್ನಾವರ ತಾಲೂಕಿನ ಹುಲಿಕೇರಿ ಗ್ರಾಮದ ಇಂದಿರಮ್ಮನ ಕೆರೆ ತುಂಬಿದ್ದು, ಪ್ರವಾಹ ಉಂಟಾಗುವ ಸಂಭವವಿದೆ ಎಂದು ಅಳ್ನಾವರ ತೆಹಸೀಲ್ದಾರ್ ಬಸವರಾಜ ಬೆಣ್ಣಿಶಿರೂರ ಮುನ್ನೆಚ್ಚರಿಕೆ ನೀಡಿದ್ದಾರೆ.

ಕೊಪ್ಪಳ ಜಿಲ್ಲೆ, ಮುನಿರಾಬಾದ್ ತುಂಗಭದ್ರಾ ಜಲಾಶಯ ಭರ್ತಿಯಾಗಿದೆ. ಜಲಾಶಯದ 33 ಗೇಟ್‌ಗಳನ್ನು ತೆರೆದು, ನದಿಗೆ ನೀರು ಬಿಡಲಾಗಿದೆ. ಜಲಾಶಯವನ್ನು ಕಣ್ತುಂಬಿಕೊಳ್ಳಲು ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುತ್ತಿದ್ದಾರೆ.

<><><>

ವಯನಾಡ್ ದುರಂತದಲ್ಲಿ ಸಿಲುಕಿದವರಿಗೆ ಅಗತ್ಯ ಸಹಾಯ, ಸಹಕಾರ ಮತ್ತು ನೆರವಿನ ಹಸ್ತವನ್ನು, ರಾಜ್ಯ ಸರ್ಕಾರ ನೀಡಲಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ್ದಾರೆ.

ಚಾಮರಾಜನಗರ ಜಿಲ್ಲೆಯ ಇಬ್ಬರು ವೈನಾಡ್ ಭೂ ಕುಸಿತದಲ್ಲಿ ಮೃತಪಟ್ಟಿದ್ದು, ಇಬ್ಬರು ನಾಪತ್ತೆಯಾಗಿದ್ದಾರೆ. ಚಾಮರಾಜನಗರ ಜಿಲ್ಲಾಧಿಕಾರಿ ಕಚೇರಿಯಲ್ಲಿ, ತುರ್ತು ಸಹಾಯವಾಣಿ ತೆರೆಯಲಾಗಿದೆ. ಇಬ್ಬರು ಐ.ಎ.ಎಸ್. ಅಧಿಕಾರಿಗಳಾದ ಪಿ.ಸಿ. ಜಾಫರ್ ಹಾಗೂ ದಿಲೀಶ್ ಶಶಿ ಅವರನ್ನು, ರಕ್ಷಣೆ ಮತ್ತು ಪರಿಹಾರ ಕಾರ್ಯಗಳ ಸಮನ್ವಯಕ್ಕಾಗಿ ನಿಯೋಜಿಸಿದ್ದಾಗಿ, ಅವರು ತಿಳಿಸಿದ್ದಾರೆ.

ರಕ್ಷಣಾ ತಂಡಗಳು ವಯನಾಡಿಗೆ ಶೀಘ್ರವೇ ತಲುಪಲು ಅನುವಾಗುವಂತೆ, ಬಂಡಿಪುರ ಚೆಕ್ ಪೋಸ್ಟ್ ನಲ್ಲಿ ಎನ್.ಡಿ.ಆರ್.ಎಫ್ ಹಾಗೂ ಸೇನೆಯ ತಂಡಗಳಿಗೆ ಹಾಗೂ ಪರಿಹಾರ ಸಾಮಗ್ರಿಗಳ ಸಾಗಾಣಿಕೆ ವಾಹನಗಳಿಗೆ, ಗ್ರೀನ್ ಕಾರಿಡಾರ್ ಮೂಲಕ ಅನಿರ್ಬಂಧಿತ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗಿದೆ.

ವೈದ್ಯಕೀಯ ನೆರವು, ಆಸ್ಪತ್ರೆ ಸೌಲಭ್ಯ ಹಾಗೂ ಗಾಯಾಳುಗಳನ್ನು ಕರೆತರಲು, ಬಸ್‌ಗಳನ್ನು ಹೆಗ್ಗಡದೇವನ ಕೋಟೆಯಲ್ಲಿ ಸನ್ನದ್ಧ ಸ್ಥಿತಿಯಲ್ಲಿ ಇರಿಸಲಾಗಿದೆ.

<><><>

ಮೈಸೂರು ಜಿಲ್ಲೆಯವರು, ಕೇರಳ ರಾಜ್ಯದ ವಯನಾಡಿನ ಭೂ ಕುಸಿತ ಅಥವಾ ಪ್ರವಾಹದಲ್ಲಿ ಸಿಲುಕಿಕೊಂಡಿದ್ದರೆ, ತುರ್ತಾಗಿ ಅಂಥವರ ಮಾಹಿತಿಯನ್ನು, 1-0-7-7 ಕ್ಕೆ ಕರೆ ಮಾಡಿ, ನೀಡುವಂತೆ ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ ಕೋರಿದ್ದಾರೆ.

<><><>

ಕೇಂದ್ರ ಹಣಕಾಸು ಖಾತೆ ಸಚಿವರಾದ ನಿರ್ಮಲಾ ಸೀತಾರಾಮನ್ ಅವರನ್ನು ಇಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಹೊಸ ದಿಲ್ಲಿಯಲ್ಲಿ ಭೇಟಿ ಮಾಡಿ, ಸಮಾಲೋಚಿಸಲಿದ್ದಾರೆ. ರಾಜ್ಯದ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ, ಅಗತ್ಯ ಹಣಕಾಸು ನೆರವು ಒದಗಿಸುವಂತೆ, ಮನವಿ ಮಾಡಲಿದ್ದಾರೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ರಾಜ್ಯದ ಕೆರೆಗಳ ಸಂರಕ್ಷಣೆ ಎಲ್ಲರ ಹೊಣೆ; ತನ್ಮೂಲಕ ಅಂತರ್ಜಲ ವೃದ್ಧಿಗಾಗಿ ವೈಜ್ಞಾನಿಕ ಯೋಜನೆಗಳನ್ನು ರೂಪಿಸಿದ್ದಾಗಿ, ಸಣ್ಣ ನೀರಾವರಿ ಖಾತೆ ಸಚಿವ ಎನ್.ಎಸ್.ಬೋಸರಾಜು ತಿಳಿಸಿದ್ದಾರೆ.

ರಾಯಚೂರು ಮಲಿಯಾಬಾದ್ ನ ಸಮುಸಮುದ್ರ ಕೆರೆ ಹಾಗೂ ಮಲ್ಲಾ ಕೆರೆ, ದೇವನಪಲ್ಲಿ ಊರ ಕೆರೆ, ವಡವಾಟಿ, ಕುರುಬದೊಡ್ಡಿ ಯದ್ದಲಕುಂಟೆ ಕೆರೆ ಹಾಗೂ ಬಿಜನಗೇರಾದಲ್ಲಿ, ಕೆರೆ ಅಭಿವೃದ್ಧಿ ಕಾಮಗಾರಿಗಳನ್ನು ಸಚಿವರು ಪರಿಶೀಲಿಸಿದರು.

ಕೃಷಿ ಚಟುವಟಿಕೆಗಳಿಗಾಗಿ ರೈತರು ಕೆರೆ, ಕುಂಟೆ, ಕಟ್ಟೆಗಳ ಮೇಲೆ ಅವಲಂಬಿತರು. ಜಲಚರಗಳು, ಪ್ರಾಣಿ, ಪಕ್ಷಿಗಳ ಬದುಕಿಗೂ ಆಸರೆ. ಹೀಗಾಗಿ ಕೆರೆ ಒತ್ತುವರಿ ತೆರವುಗೊಳಿಸಿ, ಕೆರೆ ಪಾತಳಿ ಮತ್ತು ಒಳ–ಹೊರ ಹರಿವಿನ ತೂಬು ಹಿಗ್ಗಿಸುವ, ವೈಜ್ಞಾನಿಕ ಕಾಮಗಾರಿಗೆ ಒತ್ತು ನೀಡಲಾಗುತ್ತಿದೆ ಎಂದು, ಸಚಿವ ಬೋಸರಾಜು ಹೇಳಿದರು.

<><><>

ಧಾರವಾಡ ಜಿಲ್ಲೆಯ ಪ್ರತಿ ಗ್ರಾಮ ಮತ್ತು ನಗರದ ವಾರ್ಡಗಳಲ್ಲಿ, ಕಚ್ಚಾ ಮತ್ತು ಸೋರುತ್ತಿರುವ ಮನೆಗಳ ಸಮೀಕ್ಷೆ ಮಾಡಿ, ಅಲ್ಲಿ ವಾಸವಿರುವ ಕುಟುಂಬಗಳಿಗೆ ಮುನ್ನೆಚ್ಚರಿಕೆ ನೀಡಿ, ಪರ್ಯಾಯ ವ್ಯವಸ್ಥೆ ಕಲ್ಪಿಸಿ ಸ್ಥಳಾಂತರಿಸುವಂತೆ, ಜಿಲ್ಲಾ ಉಸ್ತುವಾರಿ ಸಚಿವ, ಸಂತೋಷ ಲಾಡ್, ಜಿಲ್ಲಾಡಳಿತಕ್ಕೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಜಿಲ್ಲಾ ಮಟ್ಟದ ವಿಪತ್ತು ನಿರ್ವಹಣೆ ಸಭೆ ಅಧ್ಯಕ್ಷತೆ ವಹಿಸಿ, ಅವರು ಮಾತನಾಡಿದರು.

ಜಿಲ್ಲಾಧಿಕಾರಿ ದಿವ್ಯಾ ಪ್ರಭು ಸಭೆಗೆ ಮಾಹಿತಿ ನೀಡಿ, ನವಲಗುಂದ ತಾಲೂಕಿನ ಬೆಣ್ಣೆ ಹಳ್ಳ ಮತ್ತು ತುಪ್ಪರಿ ಹಳ್ಳಗಳ ಪ್ರವಾಹದಿಂದ ಐದು ತಾಲೂಕುಗಳ 35 ಗ್ರಾಮ ಪಂಚಾಯ್ತಿಗಳ ವ್ಯಾಪ್ತಿಯ, 56 ಗ್ರಾಮಗಳು ಬಾಧಿತವಾಗಲಿವೆ. ಗ್ರಾಮ ಪಂಚಾಯ್ತಿ ಮಟ್ಟದಲ್ಲಿ ವಿಪತ್ತು ನಿರ್ವಹಣಾ ಸಮಿತಿಗಳನ್ನು ರಚಿಸಿ, ರಕ್ಷಣಾ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

<><><>

ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಬಳಿ, 2 ಸಾವಿರದ 873 ಎಕರೆ ಹಾಗೂ ಬಾಗೇಪಲ್ಲಿ ತಾಲೂಕಿನ ಕೊಂಡರೆಡ್ಡಿಪಲ್ಲಿ ಬಳಿ, 800 ಎಕರೆ ಭೂಮಿ ಸೇರಿದಂತೆ, ಒಟ್ಟು 5 ಸಾವಿರಕ್ಕೂ ಹೆಚ್ಚು ಎಕರೆ ಭೂಮಿಯನ್ನು ಕೈಗಾರಿಕಾ ವಲಯಕ್ಕಾಗಿ ಗುರುತಿಸಲಾಗಿದೆ ಎಂದು, ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಚಿಂತಾಮಣಿ ತಾಲೂಕಿನ ವೈಜಕೂರು ಗ್ರಾಮದ, ಹಾಲು ಉತ್ಪಾದಕರ ಸಹಕಾರ ಸಂಘ ಆಯೋಜಿಸಿದ್ದ, ಸಾಮೂಹಿಕ ಹಾಲು ಕರೆಯುವ ಯಂತ್ರಗಳ ಘಟಕ ಮತ್ತು ಸೌರ ಫಲಕಗಳ ಘಟಕವನ್ನು ಉದ್ಘಾಟಿಸಿ, ಅವರು ಮಾತನಾಡಿದರು.

ಶೀಘ್ರದಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರಿ ಹಾಲು ಒಕ್ಕೂಟ – ಚಿಮುಲ್ ಅಸ್ತಿತ್ವಕ್ಕೆ ಬರಲಿದೆ ಎಂದರು.

<><><>

ಬೀದರ್ ಜಿಲ್ಲೆಯಲ್ಲಿ ಈ ವರ್ಷ, 49 ಬಾಲ ಗರ್ಭಿಣಿ ಪ್ರಕರಣಗಳು ದಾಖಲಾಗಿದ್ದಾಗಿ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು, ಮಾತನಾಡಿದರು.

<><><>

ಹಾವೇರಿ ಜಿಲ್ಲೆಯಲ್ಲಿ ಕಳೆದ ಎಪ್ರಿಲ್, ಮೇ ಹಾಗೂ ಜೂನ್ ತಿಂಗಳಿನಲ್ಲಿ, 176 ಬಾಲ ಗರ್ಭಿಣಿಯರು ಪತ್ತೆಯಾಗಿದ್ದಾರೆ ಎಂದು, ಜಿಲ್ಲಾ ಪಂಚಾಯಿತಿ ಸಿ.ಇ.ಓ. ಅಕ್ಷಯ್ ಶ್ರೀಧರ ತಿಳಿಸಿದ್ದಾರೆ.

ಎಪ್ರಿಲ್, ಮೇ ಹಾಗೂ ಜೂನ್ ತಿಂಗಳಿನಲ್ಲಿ, 29 ಪೋಕ್ಸೊ ಪ್ರಕರಣಗಳು ದಾಖಲಾಗಿವೆ. 24 ಬಾಲ್ಯ ವಿವಾಹಗಳನ್ನು ತಡೆಯಲಾಗಿದೆ. ಹೆಣ್ಣು ಮಕ್ಕಳನ್ನು ರಕ್ಷಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು, ಆಕಾಶವಾಣಿಗೆ ಅವರು ಪ್ರತಿಕ್ರಿಯಿಸಿದ್ದಾರೆ.

<><><>

ಸಿ.ಇ.ಓ. ಅಕ್ಷಯ್ ಶ್ರೀಧರ ಧ್ವನಿ 49 ಸೆಕೆಂದುಗಳು

<><><>

ಬಾಗಲಕೋಟೆ ಜಿಲ್ಲೆ, ಬೀಳಗಿಯ ಖ್ಯಾತ ಶಹನಾಯಿ ವಾದಕ, ಸನಾದಿ ಅಪ್ಪಣ್ಣನವರ ಸಮಾಧಿಯ ನವೀಕರಣಕ್ಕೆ ಕ್ರಮ ಕೈಗೊಳ್ಳುವುದಾಗಿ, ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪಲ್ಲವಿ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ, ಅಲೆಮಾರಿ ಅಭಿವೃದ್ಧಿ ನಿಗಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು, ಮಾತನಾಡಿದರು.

ಬಾದಾಮಿ ತಾಲೂಕಿನ ಕಾಟಾಪೂರದಲ್ಲಿ ತಾವು ಗ್ರಾಮ ವಾಸ್ತವ್ಯ ಕೈಗೊಂಡಿದ್ದು, ಶಿಳ್ಳೇಖ್ಯಾತ ಸಮುದಾಯಕ್ಕೆ ಸೇರಿದ, 70 ಕುಟುಂಬಗಳಿವೆ. ಓರ್ವ ವ್ಯಕ್ತಿಯೂ ಪದವಿ ವರೆಗೆ ವ್ಯಾಸಂಗ ಮಾಡದಿರುವುದು ಕಳವಳದ ಸಂಗತಿ. ನಿಗಮ ಕ್ರಮ ಕೈಗೊಳ್ಳಲಿದೆ ಎಂದರು.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

ಇಳಕಲ್ ಡಾಕ್ಟರ್ ಮಹಾಂತ ಶಿವಯೋಗಿಗಳ, ಜನ್ಮ ದಿನದ ಹಿನ್ನೆಲೆ, ನಾಳೆ ಆಗಸ್ಟ್ 1 ರಂದು, ಧಾರವಾಡದ ಡಿಮ್ಹಾನ್ಸ್‌ನಲ್ಲಿ, ವ್ಯಸನ ಮುಕ್ತಿ ವಿಚಾರ ಸಂಕಿರಣ ಜರುಗಲಿದೆ.

ಕಲಬುರಗಿ ಮಹಾನಗರ ಪಾಲಿಕೆಯ ಮಹಾಪೌರರಾಗಿ, ಯಲ್ಲಪ್ಪ ನಾಯ್ಕೋಡಿ ಹಾಗೂ ಉಪ ಮಹಾಪೌರರಾಗಿ ಹೀನಾ ಬೇಗಂ ಅಧಿಕಾರ ಸ್ವೀಕರಿಸಿದ್ದಾರೆ.

ಪ್ಯಾರಿಸ್ ಒಲಿಂಪಿಕ್ಸ್ ನ 10 ಮೀಟರ್ ಏರ್ ಪಿಸ್ತೂಲ್ ಶೂಟಿಂಗ್ ಸ್ಪರ್ಧೆಯಲ್ಲಿ, ಕಂಚಿನ ಪದಕ ಗೆದ್ದಿದ್ದ ಮನು ಭಾಕರ್, ಮಿಶ್ರ ವಿಭಾಗದಲ್ಲಿ, ಸರಬ್‌ಜೋತ್ ಸಿಂಗ್ ಜೊತೆಗೂಡಿ ಮತ್ತೊಂದು ಕಂಚಿನ ಪದಕ ಗೆದ್ದಿದ್ದಾರೆ.

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

- ರಾಜ್ಯಾದ್ಯಂತ ವ್ಯಾಪಕ ಮಳೆ; ಪ್ರಾಕೃತಿಕ ವಿಕೋಪ ಎದುರಿಸಲು, ಸನ್ನದ್ಧವಾಗಿರುವಂತೆ, ಜಿಲ್ಲಾಡಳಿತಗಳಿಗೆ ಕಟ್ಟುನಿಟ್ಟಿನ ಸೂಚನೆ.
- ವಯನಾಡ್ ದುರಂತ; ಅಗತ್ಯ ನೆರವು ಒದಗಿಸಲಾಗಿದೆ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಕೆರೆಗಳ ಸಂರಕ್ಷಣೆ; ತನ್ಮೂಲಕ, ಅಂತರ್ಜಲ ವರ್ಧನೆಗೆ ವೈಜ್ಞಾನಿಕ ಯೋಜನೆ – ಸಚಿವ ಎನ್.ಎಸ್.ಬೋಸರಾಜು.
- ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ, 5 ಸಾವಿರ ಎಕರೆ ಭೂಮಿ, ಕೈಗಾರಿಕಾ ವಲಯಕ್ಕೆ ಮೀಸಲು – ಸಚಿವ ಎಂ.ಸಿ.ಸುಧಾಕರ್.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 9 ಗಂಟೆ 5 ನಿಮಿಷಕ್ಕೆ.

<><><>